# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1694(1905)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸ್ಥಾಪನೆ

(ಅ) ಮೈಸೂರು ನಗರದ ಪ್ರಸಕ್ತ ಕುಡಿಯುವ ನೀರಿನ ಬೇಡಿಕೆಯ ಪ್ರಮಾಣ ಎಷ್ಟು; ಈಗ ವಿವಿಧ ಮೂಲಗಳಿಂದ ಸರಬರಾಜಾಗುತ್ತಿರುವ ನೀರಿನ ಪ್ರಮಾಣ ಎಷ್ಟು;

(ಆ) ಮೈಸೂರು ನಗರಕ್ಕೆ ಹಾಗೂ ಸುತ್ತಮುತ್ತಲ ಹೊಸ ಬಡಾವಣೆಗಳಿಗೆ ನೀರು ಸರಬರಾಜು ಮಾಡುವ ಬಗ್ಗೆ ಪ್ರಸ್ತುತ ಯಾವ ಯಾವ ಹೊಸ ಯೋಜನೆಗಳನ್ನು ರೂಪಿಸಲಾಗಿದೆ; ಯಾವ ಯೋಜನೆಗಳು ಕಾರ್ಯರೂಪದಲ್ಲಿವೆ; ಯಾವ ಯಾವ ಯೋಜನೆಯಲ್ಲಿ ಪೂರ್ಣಗೊಂಡಿವೆ ಹಾಗೂ ಇನ್ನೂ ಬಾಕಿ ಇರುವ ಕಾಮಗಾರಿಗಳ ವಿವರ ನೀಡುವುದು;

(ಇ) ಮೈಸೂರು ನಗರಕ್ಕೆ ನೀರು ಸರಬರಾಜು ಮಾಡುತ್ತಿರುವ ಹಾಗೂ ಹೊಸದಾಗಿ ಕಾರ್ಯರೂಪಕ್ಕೆ ಬರುತ್ತಿರುವ ಯೋಜನೆಗಳನ್ನು ಸಮಗ್ರವಾಗಿ ಮೈಸೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ಸ್ಥಾಪಿಸಿ ಅದರ ವ್ಯಾಪ್ತಿಯಲ್ಲಿ ತರಲು ಕ್ರಮ ಜರುಗಿಸಲಾಗುವುದೇ; ಮಹಾರಾಜರ ಕಾಲದಲ್ಲಿ ಸ್ಥಾಪಿತವಾಗಿದ್ದ ವಾಣಿವಿಲಾಸ ವಾಟರ್ಸ್ ವರ್ಕ್ಸ್‌ನ್ನು ಮೈಸೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಎಂದು ಪುನರ್‌ರೂಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?